# Bangalore
# Regional News
# 08.07.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ದೇಶಾದ್ಯಂತ ಭಯೋತ್ಪಾದನಾ ಜಾಲ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್‌ಐಎ ಅಧಿಕಾರಿಗಳಿಂದ ದಾಳಿ ; ರಾಜ್ಯದಲ್ಲೂ ಶೋಧ ಕಾರ್ಯ
2. ಚುನಾವಣಾ ಆಯೋಗ ಕೇಂದ್ರ ಸರ್ಕಾರದ ಕೈಗೊಂಬೆ - ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರೋಪ
3. ಅಕ್ರಮ ಆಸ್ತಿ ಪ್ರಕರಣ ; ರಾಜ್ಯದ ವಿವಿಧೆಡೆ ಲೋಕಾಯುಕ್ತ ಅಧಿಕಾರಿಗಳಿಂದ ಪರಿಶೀಲನೆ
4. ಸರ್ಕಾರದ ಗ್ರೀನ್ ಬೆಂಗಳೂರು ನೆಡು ತೋಪು ಅಭಿಯಾನ ವಿಫಲ ; ಪ್ರತಿಪಕ್ಷ ನಾಯಕ ಆರ್.ಅಶೋಕ
5. ಕೊಡಗು ಸೇರಿದಂತೆ ರಾಜ್ಯದ ವಿವಿಧೆಡೆ ಮುಂದುವರಿದ ಮಳೆ ; ಕೆಆರ್‌ಎಸ್ ಅಣೆಕಟ್ಟೆಯ ಒಳ ಹರಿವಿನಲ್ಲಿ ಹೆಚ್ಚಳ

<><><><>

ಭಯೋತ್ಪಾದನಾ ಜಾಲ ಪ್ರಕರಣಕ್ಕೆ ಸಂಬಂಧಿಸಿದಂತೆ ದೇಶಾದ್ಯಂತ ಎನ್‌ಐಎ ಅಧಿಕಾರಿಗಳು ಇಂದು ೧೦ ಸ್ಥಳಗಳಲ್ಲಿ ದಾಳಿ ನಡೆಸಿದ್ದಾರೆ. ಬಳ್ಳಾರಿಯಲ್ಲಿ ಬಂಧಿಸಲಾಗಿದ್ದ ಶಂಕಿತ ಭಯೋತ್ಪಾದಕ ನೀಡಿದ ಮಾಹಿತಿ ಮೇರೆಗೆ ರಾಜ್ಯದಲ್ಲೂ ಎನ್‌ಐಎ ಅಧಿಕಾರಿಗಳು ತನಿಖೆ ಚುರುಕುಗೊಳಿಸಿದ್ದಾರೆ. ವಿಚಾರಣೆಯ ವೇಳೆ ಆರೋಪಿಗಳು ಅಲ್-ಮಲಿಕ್ ಇಸ್ಲಾಮಿಕ್ ಯೂತ್ ಎಂಬ ಗುಂಪು ರಚಿಸಿಕೊಂಡಿರುವ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಕೆಲವು ಪಾಕಿಸ್ತಾನಿ ಪ್ರಜೆಗಳು ಈ ಗುಂಪುಗಳ ಸದಸ್ಯರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಎನ್‌ಐಎ ವಿಚಾರಣೆ ತೀವ್ರಗೊಳಿಸಿದೆ. ಆರೋಪಿಗಳಿಗೆ ಬೇರೆ ಯಾವುದೇ ವ್ಯಕ್ತಿಗಳು ಅಥವಾ ಸಂಘಟನೆಗಳೊಂದಿಗೆ ಸಂಪರ್ಕವಿದೆಯೇ ಎಂದು ಖಚಿತಪಡಿಸಿಕೊಳ್ಳಲು ಎನ್‌ಐಎ ಅಧಿಕಾರಿಗಳು ಅವರ ನಿವಾಸದಲ್ಲಿ ಶೋಧ ಕಾರ್ಯ ನಡೆಸುತ್ತಿದ್ದಾರೆ.

<><><><>

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತಂತೆ ಮೊದಲು ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇ ಕಾಂಗ್ರೆಸ್ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡಿದ್ದಾರೆ. ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಕುರಿತಂತೆ ಎನ್‌ಡಿಎ ನಿಯೋಗ ಕೇಂದ್ರ ಚುನಾವಣಾ ಆಯೋಗಕ್ಕೆ ದೂರು ನೀಡಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಬಿಜೆಪಿ, ಜೆಡಿಎಸ್ ದೂರಿಗೆ ಕೇಂದ್ರ ಚುನಾವಣಾ ಆಯೋಗ ಸ್ಪಂದಿಸಿದೆ. ಆದರೆ, ತಾವು ನೀಡಿದ ದೂರಿನ ಬಗ್ಗೆ ಇನ್ನೂ ಪ್ರತಿಕ್ರಿಯಿಸಿಲ್ಲ ಎಂದು ಆಯೋಗದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಚುನಾವಣಾ ಆಯೋಗ ಕೇಂದ್ರ ಸರ್ಕಾರದ ಕೈಗೊಂಬೆಯಾಗಿದೆ ಎಂದು ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.

ಧ್ವನಿ : ಪ್ರಿಯಾಂಕ್ ಖರ್ಗೆ (೨೯ ಸೆಕೆಂಡ್‌ಗಳು)

<><><>

ರಾಜ್ಯದಲ್ಲಿ ಅಕ್ರಮ ಆಸ್ತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು, ಧಾರವಾಡ, ಶಿವಮೊಗ್ಗ, ರಾಯಚೂರಿನಲ್ಲಿ ಲೋಕಾಯುಕ್ತ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿ, ಅಕ್ರಮ ಆಸ್ತಿ ಕುರಿತಂತೆ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ. ಬೆಂಗಳೂರು ದಕ್ಷಿಣ ಜಿಲ್ಲೆಯ ಕುಂಬಳಗೋಡು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಸಂಬಂಧಿಸಿದ ಮನೆ, ಕಚೇರಿ ಮತ್ತು ಆಸ್ತಿಗಳ ಮೇಲೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರಿನ ನಾಲ್ಕು ಕಡೆ ಏಕಕಾಲದಲ್ಲಿ ದಾಳಿ ನಡೆದಿದೆ. ಶಿವಮೊಗ್ಗದ ಸಹಾಯಕ ಅರಣ್ಯಾಧಿಕಾರಿಯ ಶಿವಮೊಗ್ಗ ಕಚೇರಿ ಹಾಗೂ ಧಾರವಾಡ ನಿವಾಸದ ಮೇಲೂ ದಾಳಿ ನಡೆಸಿ ಅಕ್ರಮ ಆಸ್ತಿ ಕುರಿತಂತೆ ಪರಿಶೀಲನೆ ನಡೆಯುತ್ತಿದೆ.

<><><>

ಪ್ರಧಾನಿ ನರೇಂದ್ರ ಮೋದಿ, ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರ ಆಹ್ವಾನದ ಮೇರೆಗೆ ಮೆಲ್ಬರ್ನ್ ಪ್ರವಾಸ ಕೈಗೊಂಡಿದ್ದಾರೆ. ಉಭಯ ನಾಯಕರ ಈ ಭೇಟಿಯು ವೇಗವಾಗಿ ಬದಲಾಗುತ್ತಿರುವ ಇಂಡೋ-ಪೆಸಿಫಿಕ್ ವಲಯದ ಭದ್ರತಾ ವ್ಯವಸ್ಥೆಯಲ್ಲಿ ಒಂದು ಪ್ರಮುಖ ಮೈಲಿಗಲ್ಲಾಗಿದೆ. ಜೊತೆಗೆ ರಕ್ಷಣೆ, ಭದ್ರತೆ, ವ್ಯಾಪಾರ ಮತ್ತು ಹೂಡಿಕೆಗಳಾದ್ಯಂತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ವ್ಯವಸ್ಥಿತವಾಗಿ ಮುನ್ನಡೆಸಲಿದೆ. ಐತಿಹಾಸಿಕ ಆರ್ಥಿಕ ಸಹಕಾರ ಮತ್ತು ವ್ಯಾಪಾರ ಒಪ್ಪಂದದ ರಚನಾತ್ಮಕ ಪ್ರಯೋಜನಗಳನ್ನು ಬಳಸಿಕೊಂಡು ದ್ವಿಪಕ್ಷೀಯ ಸಂಬಂಧಗಳಿಗೆ ಹೊಸ ವೇಗವನ್ನು ನೀಡುವ ಗುರಿ ಹೊಂದಿದೆ. ಈ ಕುರಿತಂತೆ ಮೆಲ್ಬರ್ನ್‌ನಲ್ಲಿರುವ ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗದ ಸಹಾಯಕ ನಿರ್ದೇಶಕರಾದ ಸುಹಾಸ್ .ಆರ್ ಅವರಿಂದ ಒಂದು ವರದಿ.

ಧ್ವನಿ : ಸುಹಾಸ್ ಆರ್ (೩೮ ಸೆಕೆಂಡ್‌ಗಳು)

<><><>

೫೪ ಕೋಟಿ ರೂಪಾಯಿ ವೆಚ್ಚದ ಗ್ರೀನ್ ಬೆಂಗಳೂರು ನೆಡು ತೋಪು ಅಭಿಯಾನ ವಿಫಲವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಕಳಪೆ ನಿರ್ವಹಣೆಯಿಂದಾಗಿ ಸಾವಿರಾರು ಸಸಿಗಳು ಒಣಗುತ್ತಿವೆ ಎಂದು ದೂರಿದ್ದಾರೆ. ಸಸಿಗಳ ನಿರ್ವಹಣೆಗೆ ಮೀಸಲಿಟ್ಟ ಹಣವನ್ನು ಹೇಗೆ ಬಳಸಲಾಗಿದೆ ಎಂಬುದನ್ನು ರಾಜ್ಯ ಸರ್ಕಾರ ಬಹಿರಂಗ ಪಡಿಸಬೇಕು ಎಂದು ಆಗ್ರಹಿಸಿದ್ದಾರೆ. ಇನ್ನೊಂದೆಡೆ ಮಳೆನಾಡು, ಕರಾವಳಿಯಲ್ಲಿ ಭೂಕುಸಿತದ ಭೀತಿ ಎದುರಾಗಿದ್ದು, ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ದೂರಿದ್ದಾರೆ. ಕೂಡಲೇ ಹೈಅಲರ್ಟ್ ಘೋಷಿಸಿದ ಪ್ರದೇಶಗಳಿಗೆ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು ಭೇಟಿ ನೀಡಿ, ರಕ್ಷಣಾ ಕಾರ್ಯಾಚರಣೆಯ ನೇತೃತ್ವ ವಹಿಸಬೇಕು ಎಂದು ಒತ್ತಾಯಿಸಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಮಳೆ ಮುಂದುವರೆದಿದೆ. ದಕ್ಷಿಣ ಕನ್ನಡ, ಉತ್ತರಕನ್ನಡ, ಉಡುಪಿ ಜಿಲ್ಲೆಯಲ್ಲಿ ಮಳೆ ಮುಂದುವರೆದಿದ್ದು, ಜಿಲ್ಲಾಡಳಿತ ಇಂದು ರೆಡ್ ಅಲರ್ಟ್ ಘೋಷಿಸಿದೆ. ಈ ನಡುವೆ ಮಹಾರಾಷ್ಟ್ರದಲ್ಲಿ ಮಳೆಯಾಗುತ್ತಿರುವುದರಿಂದ ಉತ್ತರ ಕರ್ನಾಟಕದ ನದಿಗಳು ತುಂಬಿ ಹರಿಯುತ್ತಿವೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆಗಳಲ್ಲಿ ಉತ್ತಮ ಮಳೆಯಾಗುತ್ತಿದೆ. ಭಾರೀ ಮಳೆ ಹಿನ್ನಲೆಯಲ್ಲಿ ಇಂದು ಜಿಲ್ಲೆಯ ಶಾಲೆಗಳಿಗೆ ರಜೆ ನೀಡಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಗಾಳಿಯಿಂದಾಗಿ ವಿದ್ಯುತ್ ಸಂಪರ್ಕ ವ್ಯತ್ಯಯವಾಗಿದೆ. ವಿರಾಜಪೇಟೆ ತಾಲೂಕಿನಲ್ಲಿ ಮಳೆಯ ತೀವ್ರತೆಯಿಂದಾಗಿ ಕೆಲವೊಂದು ಗ್ರಾಮಗಳ ರಸ್ತೆ ಸಂಪರ್ಕ ಕಡಿತಗೊಂಡಿದೆ. ಅಮ್ಮತ್ತಿ ವ್ಯಾಪ್ತಿಯ ಕಾವೇರಿ ನದಿ ತೀರದಲ್ಲಿನ ಕರಡಿಗೋಡು - ಚಿಕ್ಕನಹಳ್ಳಿ ಗ್ರಾಮಗಳ ಸಂಪರ್ಕ ಕಡಿತವಾಗಿದೆ. ಮಳೆ ಹಿನ್ನೆಲೆಯಲ್ಲಿ ಜನರು ಜಲಪಾತ, ನದಿ, ತೊರೆಗಳಿಗೆ ತೆರಳುವುದನ್ನು ಹಾಗೂ ಅಪಾಯಕಾರಿ ಪ್ರದೇಶಗಳಿಗೆ ತೆರಳದಂತೆ ಕೊಡಗು ಜಿಲ್ಲಾಡಳಿತ ಸೂಚಿಸಿದೆ. ಹಾರಂಗಿ ಜಲಾಶಯಕ್ಕೂ ನೀರಿನ ಹರಿವಿನ ಪ್ರಮಾಣ ಹೆಚ್ಚಾಗಿದ್ದು, ಪ್ರಸ್ತುತ ೨ ಸಾವಿರದ ೧೦೦ ಕ್ಯೂಸೆಕ್ ನೀರು ಹರಿದು ಬರುತ್ತಿದೆ. ೨ ಸಾವಿರದ ೮೫೯ ಅಡಿ ಗರಿಷ್ಠ ಸಂಗ್ರಹ ಸಾಮರ್ಥ್ಯದ ಹಾರಂಗಿ ಜಲಾಶಯದಲ್ಲಿ ಈಗ ೨ ಸಾವಿರದ ೮೩೯ ಅಡಿಗಳಷ್ಟು ನೀರು ಸಂಗ್ರಹವಾಗಿದೆ. ಕೊಡಗು ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವುದರಿಂದ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಅಣೆಕಟ್ಟೆಯ ಒಳ ಹರಿವಿನಲ್ಲಿ ವ್ಯಾಪಕ ಏರಿಕೆ ಕಂಡಿದೆ. ನಿನ್ನೆ ೫ ಸಾವಿರದ ೭೩೪ ಇದ್ದ ಒಳ ಹರಿವಿನ ಪ್ರಮಾಣ ರಾತ್ರಿ ವೇಳೆಗೆ ೭ ಸಾವಿರದ ೫೩೧ಕ್ಕೆ ಏರಿಕೆಯಾಗಿದೆ. ಅಣೆಕಟ್ಟೆನಿಂದ ೭೯೦ ಕ್ಯೂಸೆಕ್ ನೀರನ್ನು ನದಿಗೆ ಹರಿಬಿಡಲಾಗುತ್ತಿದೆ. ಈ ಕುಡಿಯುವ ನೀರಿಗೆ ಮಾತ್ರ ಬಳಕೆಯಾಗಲಿದ್ದು, ತಮಿಳುನಾಡಿಗೆ ನೀರು ಬಿಟ್ಟಿಲ್ಲ ಎಂದು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ.

<><><><>

ಂಗಳೂರಿನಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯ ಮುಂದುವರೆದಿದೆ. ಜಿಬಿಎ ವ್ಯಾಪ್ತಿಯ ಕೇಂದ್ರ ಪಾಲಿಕೆ ವತಿಯಿಂದ ಕೆ.ಆರ್.ಮಾರ್ಕೆಟ್‌ನಲ್ಲಿ ಇಂದು ಪಾದಚಾರಿಗಳ ಮಾರ್ಗಗಳ ಒತ್ತುವರಿ ತೆರವು ಕಾರ್ಯ ನಡೆಯಿತು. ಬೆಂಗಳೂರು ಉತ್ತರನಗರ ಪಾಲಿಕೆಯ ಬ್ಯಾಟರಾಯನಪುರ, ಪುಲಕೇಶಿ ನಗರ ವಿಭಾಗದ ಪಾಟರಿ ರಸ್ತೆ, ದಾಸರಹಳ್ಳಿ ವಿಭಾಗದ ಎಂಇಐ ಲೇಔಟ್ ಮುಖ್ಯರಸ್ತೆಯಲ್ಲಿಯೂ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯ ನಡೆಯಿತು. ಇನ್ನೊಂದೆಡೆ ಪಶ್ಚಿಮ ಮಹಾನಗರ ಪಾಲಿಕೆಯ ಗಿರಿನಗರ, ಬಸವನಗುಡಿ ವ್ಯಾಪ್ತಿಯಲ್ಲೂ ಅಧಿಕಾರಿಗಳು ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಿದ್ದಾರೆ.

<><><><>

ಸ್ವಚ್ಛ ನಗರ ನಿರ್ಮಾಣವೇ ಮೊದಲ ಆದ್ಯತೆಯಾಗಿದೆ ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ನೂತನ ಮೇಯರ್ ದುರ್ಗಮ್ಮ ಬಿಜವಾಡ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆಗಾಲ ಹಿನ್ನೆಲೆಯಲ್ಲಿ ಅವಳಿ ನಗರದಲ್ಲಿ ಅಪಾಯಕಾರಿಯಾಗಿ ನಿಂತಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸುವುದು, ಚರಂಡಿಗಳ ಸ್ವಚ್ಛತೆ ಹಾಗೂ ಫುಟ್‌ಪಾತ್ ಅತಿಕ್ರಮಣ ತೆರವು ಕಾರ್ಯವನ್ನು ಇನ್ನಷ್ಟು ಚುರುಕುಗೊಳಿಸಲಾಗುವುದು ಎಂದು ಹೇಳಿದ್ದಾರೆ. ನಗರದ ಸ್ವಚ್ಛತೆಗೆ ಸಂಬಂಧಿಸಿದಂತೆ ಪ್ರತಿವಾರ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಫುಟ್‌ಪಾತ್ ಅತಿಕ್ರಮಣ ನಿಯಮ ಉಲ್ಲಂಘಿಸಿದರೆ ದಂಡ ವಿಧಿಸುವ ಜೊತೆಗೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

<u>ಸಂಕ್ಷಿಪ್ತಸುದ್ದಿಗಳು</u>

೧. ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾ ಸ್ವೀಪ್ ವತಿಯಿಂದ ಕೋಲಾರ ನಗರದಲ್ಲಿ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಪ್ರವೀಣ್ ಪಿ. ಬಾಗೇವಾಡಿ ಹಸಿರು ನಿಶಾನೆ ತೋರಿಸುವ ಮೂಲಕ ರ್‍ಯಾಲಿಗೆ ಚಾಲನೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>